ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT: [illegible]

ಪತ್ರಿಕೆಯ ಹೆಸರು : NAME OF THE NEWS PAPER: ವಿಶ್ವವಾಣಿ

ದಿನಾಂಕ : DATE : 28/1/21

ವಿಶ್ವ 28/1/21



ವಿಧಾನಮಂಡಲದ ಉಭಯ ಸದನಗಳ ಜಂಟಿ ಅಧಿವೇಶನ ಇಂದಿನಿಂದ ಫೆ.5ರವರೆಗೆ ನಡೆಯಲಿದ್ದು, ವಿಧಾನಸಭೆ ಸ್ಪೀಕರ್ ವಿಶ್ವೇಶ್ವರ್ ಹೆಗಡೆ ಕಾಗೇರಿ ಅವರು ಅಧಿವೇಶನದ ಸಿದ್ಧತೆಯನ್ನು ಬುಧವಾರ ಪರಿಶೀಲಿಸಿದರು.

ವಿವರಪುಟ → 4

2

# ಇಂದಿನಿಂದ ಜಂಟಿ ಅಧಿವೇಶನ

## ರಾಜ್ಯಪಾಲ ವಿ.ಆರ್.ವಾಲಾರಿಂದ ಭಾಷಣ । ತಯಾರಿ ಪೂರ್ಣಗೊಳಿಸಿದ ವಿಧಾನಸಭೆ । ಗೋಹತ್ಯೆ ನಿಷೇಧ, ಸಭಾಪತಿ ಬದಲಾವಣೆ ಪ್ರಮುಖ ಅಸ್ತ್ರ

28|1|21

**ವಿಶ್ವವಾಣಿ ಸುದ್ದಿಮನೆ** ಬೆಂಗಳೂರು

ರಾಜ್ಯ ವಿಧಾನಮಂಡಲದ ಉಭಯ ಸದನಗಳ ಅಧಿವೇಶನ ಗುರುವಾರದಿಂದ ಫೆ.5ರವರೆಗೆ ಈ ವರ್ಷದ ಮೊದಲ ಅಧಿವೇಶನ ನಡೆಯಲಿದೆ. ಏಳು ದಿನಗಳ ಕಾಲ ನಡೆಯುವ ಈ ಅಧಿವೇಶನವು ಆಡಳಿತ ಮತ್ತು ಪ್ರತಿಪಕ್ಷಗಳ ನಡುವಿನ ವಾಕ್ಸಮರಕ್ಕೆ ವೇದಿಕೆಯಾಗಲಿದೆ. ಗುರುವಾರ ಬೆಳಗ್ಗೆ 11 ಗಂಟೆಗೆ ರಾಜ್ಯಪಾಲ ವಜುಭಾಯಿ ವಾಲಾ ಅವರು ಉಭಯ ಸದನಗಳ ಸದಸ್ಯರನ್ನು ಉದ್ದೇಶಿಸಿ, ವಿಧಾನಸಭೆಯಲ್ಲಿ ಭಾಷಣ ಮಾಡಲಿದ್ದಾರೆ. ಜ.29ರಿಂದ ಸರಕಾರದ ಅಧಿಕೃತ ಕಾರ್ಯಕಲಾಪಗಳು, ಅಧಿವೇಶನ ನಡೆಯಲಿದ್ದು, ಆ ಸಂದರ್ಭದಲ್ಲಿ ಸರಕಾರವನ್ನು ಇಕ್ಕಟ್ಟಿಗೆ ಸಿಲುಕಿಸಲು ವಿರೋಧ ಪಕ್ಷಗಳು ಸಜ್ಜಾಗಿವೆ. ಸಚಿವ ಸಂಪುಟ ವಿಸ್ತರಣೆ, ಖಾತೆ ಬದಲಾವಣೆ ಬಿಕ್ಕಟ್ಟಿನ ಬೆನ್ನಲ್ಲೇ ನಡೆಯುತ್ತಿರುವ ಅಧಿವೇಶನದಲ್ಲಿ ಪ್ರತಿಪಕ್ಷಗಳುವೊಡ್ಡುವ ಅಸ್ತ್ರಗಳನ್ನು ನೂತನ ಸಚಿವರು ಎದುರಿಸಲಿದ್ದಾರೆ.

ಜ.28ರಿಂದ ಫೆ.5ರವರೆಗೆ 7 ದಿನ ಅಧಿವೇಶನ ನಡೆಯಲಿದ್ದು, ಜಂಟಿ ಸದನವನ್ನು ಉದ್ದೇಶಿಸಿ ರಾಜ್ಯಪಾಲ ವಜುಬಾಯಿ ವಾಲಾ ಭಾಷಣ ಮಾಡಲಿದ್ದು, ಮೊದಲ ದಿನ ಅಗಲಿದ ಗಣ್ಯರಿಗೆ ಸಂತಾಪ ನಡೆಸಿ, ಜ.29ರಿಂದ ಉಳಿದ ಕಾರ್ಯಕಲಾಪ ನಡೆಯಲಿವೆ. ಬುಧವಾರ ರಾಜ್ಯಪಾಲರನ್ನು ಸ್ಪೀಕರ್ ಭೇಟಿ ಮಾಡಿ ಜಂಟಿ ಅಧಿವೇಶನ ಉದ್ದೇಶಿಸಿ ಭಾಷಣ ಮಾಡಲು ಆಹ್ವಾನಿಸಿದ್ದಾರೆ. ರಾಜ್ಯಪಾಲರ ಭಾಷಣ ಬಳಿಕ ಸಂತಾಪ ಸೂಚನೆ ಆನಂತರ ಕಲಾಪ ಮುಂದೂಡಲಾಗುತ್ತದೆ. ಶುಕ್ರವಾರದಿಂದ ಪ್ರಶ್ನೋತ್ತರ ಕಲಾಪ ಸೇರಿ ಉಳಿದ ಕಲಾಪಗಳು ನಡೆಯುತ್ತವೆ. ಈ ಬಾರಿ 11 ಮಸೂದೆಗಳು ಅಧಿವೇಶನದಲ್ಲಿ ಮಂಡನೆಯಾಗುತ್ತಿವೆ.



ಕೋವಿಡ್‌ನಿಂದಾಗಿ ಉಂಟಾಗಿರುವ ಆರ್ಥಿಕ ಸಂಕಷ್ಟ, ಮುಂಬರುವ ಬೇಸಿಗೆಯಲ್ಲಿ ಕುಡಿಯುವ ನೀರಿನ ಸಮಸ್ಯೆ, ವಿದ್ಯುತ್, ಪೆಟ್ರೋಲ್, ಡೀಸೆಲ್ ಸೇರಿದಂತೆ ಅಗತ್ಯ ವಸ್ತುಗಳ ಬೆಲೆ ಏರಿಕೆ, ಅತಿವೃಷ್ಟಿ ಪರಿಹಾರ ವಿಳಂಬ ಮೊದಲಾದ ವಿಚಾರಗಳು ಅಧಿವೇಶನದಲ್ಲಿ ಪ್ರಮುಖವಾಗಿ ಪ್ರಸ್ತಾಪವಾಗಲಿವೆ.

ಕೃಷಿ ಕಾಯಿದೆಯನ್ನು ವಿರೋಧಿಸಿ ರೈತರು ನಡೆಸುತ್ತಿರುವ ಪ್ರತಿಭಟನೆಯು ಉಭಯ ಸದನಗಳಲ್ಲಿ ಪ್ರತಿಧ್ವನಿಸುವ ಸಾಧ್ಯತೆ ಹೆಚ್ಚಾಗಿದೆ. ವಿಧಾನಪರಿಷತ್‌ನಲ್ಲಿ ಗೋಹತ್ಯೆ ನಿಷೇಧವನ್ನು ಮತ್ತೆ ಸರಕಾರ ಮಂಡಿಸುವ ಸಾಧ್ಯತೆಗಳಿವೆ.

## ಸಭಾಪತಿ ರಾಜೀನಾಮೆ ಸಾಧ್ಯತೆ

**ವಿಧಾನಪರಿಷತ್ ಸಭಾಪತಿ ವಿರುದ್ಧ ಬಿಜೆಪಿ ಪುನಃ ಅವಿಶ್ವಾಸ ನಿರ್ಣಯ ಮಂಡಿಸಿರುವ ಹಿನ್ನೆಲೆಯಲ್ಲಿ ವಿಧಾನಪರಿಷತ್ ಸಭಾಪತಿ ಪ್ರತಾಪ್ ಚಂದ್ರ ಶೆಟ್ಟಿ ತಮ್ಮ ಸ್ಥಾನಕ್ಕೆ ರಾಜೀನಾಮೆ ಸಲ್ಲಿಸುವ ಸಾಧ್ಯತೆ ನಿಚ್ಚಳವಾಗಿದೆ.**

**ಈಗಾಗಲೇ ಸಭಾಪತಿಯವರು ಕೆಲ ದಿನಗಳ ಹಿಂದೆಯೇ ಸರಕಾರಿ ನಿವಾಸ ಹಾಗೂ ವಾಹನವನ್ನೂ ಹಿಂತಿರುಗಿಸುವ ಮೂಲಕ ಸಭಾಪತಿ ಸ್ಥಾನದಲ್ಲಿ ನಾನು ಮುಂದುವರೆಯಲಾರೆ ಎಂಬ ಸುಳಿವು ನೀಡಿದ್ದರು. ಇದೀಗ ಜಂಟಿ ಅಧಿವೇಶನ ಆರಂಭವಾಗುತ್ತಿದ್ದು, ಬಿಜೆಪಿ ಮತ್ತೆ ಅವರ ವಿರುದ್ಧ ಅವಿಶ್ವಾಸ ನಿರ್ಣಯ ಮಂಡಿಸಿದೆ. ಪುನಃ ಸಭಾಪತಿ ಸ್ಥಾನದಲ್ಲಿ ಮುಂದುವರೆದರೆ ಸ್ವಾಭಿಮಾನಕ್ಕೆ ಧಕ್ಕೆಯಾಗಬಹುದೆಂಬ ಹಿನ್ನೆಲೆಯಲ್ಲಿ ರಾಜೀನಾಮೆ ನೀಡಿ ಗೌರವದಿಂದ ಹೊರನಡೆಯಲು ಮುಂದಾಗಿದ್ದಾರೆ. ಉಪಸಭಾಪತಿ ಚುನಾವಣೆ ಬಳಿಕ ರಾಜೀನಾಮೆ ನೀಡುವ ಸಾಧ್ಯತೆಯಿದೆ ಎಂದು ಮೂಲಗಳು ತಿಳಿಸಿವೆ.**